# Akashvani : Bangalore
# Regional Bulletin In Kannada
# 13.01.2026 / 18.40 hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸರ್ಕಾರ ಸಿದ್ದ– ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
- ಬೆಂಗಳೂರಿನಲ್ಲಿ ಬಾಂಗ್ಲಾದೇಶದ ಪ್ರಜೆಗಳ ವಿವರ ಸಂಗ್ರಹಿಸುವಂತೆ ಅಧಿಕಾರಿಗಳಿಗೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸೂಚನೆ
- ಬೀದಿ ನಾಯಿಗಳ ಸಮಸ್ಯೆ ನಿಯಂತ್ರಿಸುವಲ್ಲಿ ರಾಜ್ಯ ಸರ್ಕಾರಗಳು ಸಂಪೂರ್ಣ ವಿಫಲ– ಸರ್ವೋಚ್ಚ ನ್ಯಾಯಾಲಯ ಅಸಮಾಧಾನ
- ಅತಿವೃಷ್ಟಿಯಿಂದ ಬೆಳೆಹಾನಿ ಹಿನ್ನೆಲೆ; ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಯಲ್ಲಿ ಕೇಂದ್ರ ತಂಡದಿಂದ ಪರಿಶೀಲನೆ
- ಮೂಡಬಿದಿರೆ ಅಂತರ್ ವಿಶ್ವವಿದ್ಯಾಲಯ ಕ್ರೀಡಾಕೂಟ; ರಾಜ್ಯಕ್ಕೆ ಇಂದು ನಾಲ್ಕು ಬೆಳ್ಳಿ, ಎರಡು ಕಂಚಿನ ಪದಕ

*****************

ತಮಿಳುನಾಡು ಪ್ರವಾಸ ಕೈಗೊಂಡಿರುವ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಇಂದು ಮೈಸೂರಿಗೆ ಆಗಮಿಸಿದರು. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಹುಲ್ ಗಾಂಧಿ ಅವರನ್ನು ಬರಮಾಡಿಕೊಂಡರು.

ಇದೇ ವೇಳೆ, ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲು ಸರ್ಕಾರ ಸಿದ್ಧವಿದೆ ಎಂದು ತಿಳಿಸಿದ್ದಾರೆ. ಮಾರ್ಚ್ ಮೊದಲ ವಾರದಲ್ಲಿ ಬಜೆಟ್ ಮಂಡಿಸಲಾಗುವುದು ಎಂದು ಹೇಳಿದ್ದಾರೆ.

ಅಧಿಕಾರ ಹಂಚಿಕೆ ವಿಚಾರದಲ್ಲಿ ಪಕ್ಷದ ವರಿಷ್ಠರ ತೀರ್ಮಾನವೇ ಅಂತಿಮ ಎಂದು ಸ್ಪಷ್ಟಪಡಿಸಿದ್ದಾರೆ. ರಾಹುಲ್ ಗಾಂಧಿ ಅವರೊಂದಿಗೆ ಯಾವುದೇ ರಾಜಕೀಯ ಚರ್ಚೆ ನಡೆದಿಲ್ಲ ಎಂದು ತಿಳಿಸಿದ್ದಾರೆ.

*****************

ಬೆಂಗಳೂರಿನಲ್ಲಿ ವಾಸಿಸುವ ಬಾಂಗ್ಲಾದೇಶದ ಪ್ರಜೆಗಳ ಬಗ್ಗೆ ವಿವರಗಳನ್ನು ಸಂಗ್ರಹಿಸಲು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೊಲೀಸ್ ಮಹಾನಿರ್ದೇಶಕ ಎಂ.ಎ.ಸಲೀಂ ಹಾಗೂ ಬೆಂಗಳೂರು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರಿಗೆ ನಿರ್ದೇಶನ ನೀಡಲಾಗಿದೆ ಎಂದು ಹೇಳಿದ್ದಾರೆ.

ಈಗಾಗಲೇ ಬಾಂಗ್ಲಾದೇಶಿಗರನ್ನು ಗಡಿಪಾರು ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಯಾವುದೇ ವ್ಯಕ್ತಿಗೆ ದಾಖಲೆಗಳನ್ನು ಪರಿಶೀಲಿಸುವ ಅಧಿಕಾರವಿಲ್ಲ ಹಾಗೂ ಕಾನೂನನ್ನು ಕೈಗೆ ತೆಗೆದುಕೊಳ್ಳಲು ಸಾಧ್ಯವಿಲ್ಲ. ಇಂತಹ ಸಂದರ್ಭ ಬಂದರೆ, ಪೊಲೀಸರಿಗೆ ಮಾಹಿತಿ ನೀಡಬಹುದು ಎಂದು ತಿಳಿಸಿದ್ದಾರೆ.

*****************

ಸಾರ್ವಜನಿಕ ಸ್ಥಳಗಳಲ್ಲಿ ಬೀದಿನಾಯಿಗಳಿಗೆ ಆಹಾರ ನೀಡುವ ಜನರು ಮತ್ತು ಸಂಸ್ಥೆಗಳ ನಡವಳಿಕೆಯನ್ನು ಸುಪ್ರೀಂಕೋರ್ಟ್ ಪ್ರಶ್ನಿಸಿದೆ.

ದಯೆಯೆಂಬುದು ಪ್ರಾಣಿಗಳಿಗೆ ಮಾತ್ರ ಸೀಮಿತವೇ, ಮನುಷ್ಯರಿಗೆ ಅನ್ವಯಿಸುವುದಿಲ್ಲವೇ ಎಂದು ನ್ಯಾಯಾಲಯ ಪ್ರಶ್ನಿಸಿದೆ. ಬೀದಿನಾಯಿಗಳ ದಾಳಿಯಿಂದ ಮಗುವೊಂದು ಸಾವನ್ನಪ್ಪಿದ್ದರೆ, ಯಾರನ್ನು ಜವಾಬ್ದಾರಿಯನ್ನಾಗಿಸುವುದು ಎಂದು ಕೇಳಿದೆ.

ಬೀದಿ ನಾಯಿಗಳಿಗೆ ಸಂತಾನ ನಿಯಂತ್ರಣ ನಿಯಮಗಳನ್ನು ಸಮರ್ಪಕವಾಗಿ ಜಾರಿಗೊಳಿಸುತ್ತಿಲ್ಲ ಎಂದು ರಾಜ್ಯ ಸರ್ಕಾರಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದೆ.

*****************

ಅತಿವೃಷ್ಟಿಯಿಂದ ಕಲಬುರಗಿ ಜಿಲ್ಲೆಯ ಬೆಳೆಗಳ ಹಾನಿಗಳ ಅಧ್ಯಯನಕ್ಕೆ ಆಗಮಿಸಿರುವ ಕೇಂದ್ರ ತಂಡವು ಇಂದು ಜಿಲ್ಲೆಯ ಕಮಲಾಪುರ ತಾಲೂಕಿನ ಕಿಣ್ಣಿ ಸಡಕ್, ಡೊಂಗರಗಾಂವ್, ಭೀಮನಾಳ, ಕಮಲಾಪೂರ ಗ್ರಾಮಗಳಿಗೆ ಭೇಟಿ ನೀಡಿತು. ಈ ವೇಳೆ, ನೆರೆಯಿಂದ ಹಾನಿಯಾದ ಬೆಳೆ, ರಸ್ತೆ, ಸೇತುವೆ ಹಾನಿಯನ್ನು ಪರಿಶೀಲನೆ ನಡೆಸಿತು.

ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಜಿಲ್ಲೆಯಾದ್ಯಂತ ವಾಡಿಕೆಗಿಂತ ಹೆಚ್ಚಿನ ಮಳೆಯಿಂದ ಅಪಾರ ಪ್ರಮಾಣದ ಬೆಳೆ ಹಾನಿಯಾಗಿವೆ. ಶಾಲೆ, ಅರೋಗ್ಯ ಕೇಂದ್ರ, ಅಂಗನವಾಡಿ, ರಸ್ತೆ, ಸೇತುವೆಯಂತಹ ಮೂಲಸೌಕರ್ಯವು ಹಾನಿಗೊಳಗಾಗಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಪ್ರದೇಶದಲ್ಲಿ ವೈಮಾನಿಕ ಸಮೀಕ್ಷೆ ನಡೆಸಿ ರಾಜ್ಯ ಸರ್ಕಾರದಿಂದ ಪರಿಹಾರ ಘೋಷಿಸಿದ್ದು, ಅದರಂತೆ ಪರಿಹಾರ ಸಹ ಪಾವತಿಸಲಾಗಿದೆ ಎಂದು ಅಧಿಕಾರಿಗಳಿಗೆ ವಿವರಣೆ ನೀಡಿದರು.

ಇನ್ನೊಂದು ತಂಡ, ಮುಂಗಾರು ಹಂಗಾಮಿನಲ್ಲಿ ಸುರಿದ ಭಾರೀ ಮಳೆ ಹಾಗೂ ಭೀಮಾನದಿ ಪ್ರವಾಹದಿಂದ ಯಾದಗಿರಿ ಜಿಲ್ಲೆಯಲ್ಲಿ ಸಂಭವಿಸಿದ ಬೆಳೆ ಹಾನಿ ಕುರಿತು ಪರಿಶೀಲನೆ ನಡೆಸಿತು.

ಸಭೆಯಲ್ಲಿ ಜಿಲ್ಲಾಡಳಿತ ಹಾನಿಗೊಂಡ ಬೆಳೆಗಳು, ಮನೆಗಳು ಹಾಗೂ ಮೂಲಸೌಕರ್ಯಗಳ ಕುರಿತ ಛಾಯಾಚಿತ್ರಗಳು, ದಾಖಲೆಗಳು ಮತ್ತು ಪತ್ರಿಕಾ ವರದಿಗಳನ್ನು ತಂಡದ ಗಮನಕ್ಕೆ ತಂದಿದೆ. ಯಾದಗಿರಿ ಜಿಲ್ಲೆಯಲ್ಲಿ ಒಟ್ಟು 1.12 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದ್ದು, 1.22 ಲಕ್ಷ ರೈತರಿಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿ ಪರಿಹಾರವಾಗಿ 219 ಕೋಟಿ 61 ಲಕ್ಷ ರೂಪಾಯಿ ಪರಿಹಾರ ವಿತರಿಸಲಾಗಿದೆ ಎಂದು ತಂಡಕ್ಕೆ ಮಾಹಿತಿ ನೀಡಿದೆ.

*****************

ಬೆಂಗಳೂರಿನ ವಿಜಯನಗರ ಆರ್‌ಪಿಸಿ ಲೇಔಟ್‌ನಲ್ಲಿ ಕೈಗೆತ್ತಿಕೊಂಡಿರುವ ವೈಟ್ ಟಾಪಿಂಗ್ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಇಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಮಾತನಾಡಿದ ಅವರು, ವೆಸ್ಟ್ ಆಫ್ ಕಾರ್ಡ್ ರಸ್ತೆಯಿಂದ 5ನೆ ಮುಖ್ಯ ರಸ್ತೆಯ ವೈಟ್ ಟಾಪಿಂಗ್ ಬಾಕಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಹೊಸಕೆರೆಹಳ್ಳಿ ಬಳಿಯ ಕೆರೆ ಕೋಡಿ ರಸ್ತೆ ಅಗಲೀಕರಣ ಮಾಡಬೇಕು. ಮುಖ್ಯ ರಸ್ತೆಯಿಂದ ಕೆರೆ ಕೋಡಿ ರಸ್ತೆಗೆ ಸಂಪರ್ಕ ಕಲ್ಪಿಸುವ ಕಡೆ ನೈಸ್ ಸ್ವತ್ತನ್ನು ಹಸ್ತಾಂತರ ಮಾಡಿ, ರಸ್ತೆ ಅಗಲೀಕರಣ ಮಾಡಬೇಕೆಂದು ತಿಳಿಸಿದ್ದಾರೆ.

ನಾಗರಭಾವಿ ಕೆರೆ ಸಂಬಂಧ 3.5 ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ. ಕೆರೆಯ ಸುತ್ತಲು ಸಸಿಗಳನ್ನು ನೆಡಬೇಕು ಹಾಗೂ ಅಲಂಕಾರಿಕ ದೀಪಗಳನ್ನು ಅಳಡವಡಿಸಬೇಕು ಎಂದು ಹೇಳಿದ್ದಾರೆ.

*****************

ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದಿರೆಯ ಸ್ವರಾಜ್ ಮೈದಾನದ ನಡೆಯುತ್ತಿರುವ ಅಂತರ್ ವಿಶ್ವವಿದ್ಯಾಲಯ ಕ್ರೀಡಾಕೂಟದ ಎರಡನೇ ದಿನವಾದ ಇಂದು ಹರ್ಡಲ್ಸ್, ಡಿಸ್ಕಸ್ ತ್ರೋ, 100 ಮೀಟರ್ ಓಟ, ನಡಿಗೆ ಸೇರಿದಂತೆ ವಿವಿಧ ಸ್ಪರ್ಧೆಗಳು ನಡೆದಿದ್ದು ವಿದ್ಯಾರ್ಥಿಗಳ ಅತ್ಯುತ್ಸಾಹದಿಂದ ಪಾಲ್ಗೊಂಡಿದ್ದಾರೆ.

ಹರ್ಡಲ್ಸ್ 400 ಮೀಟರ್ ಓಟದಲ್ಲಿ ಮದ್ರಾಸ್ ವಿಶ್ವವಿದ್ಯಾಲಯದ ಮಹೇಂದ್ರ ಎಸ್ ಚಿನ್ನಕ್ಕೆ ಮುತ್ತಿಕ್ಕಿದ್ದಾರೆ. ಮಂಗಳೂರು ವಿಶ್ವವಿದ್ಯಾನಿಲಯದ ಆರ್ಯನ್ ಪ್ರಜ್ವಲ್ ಕಶ್ಯಪ್ ದ್ವಿತೀಯ ಸ್ಥಾನದೊಂದಿಗೆ ರಜತ ಪದಕ ಗೆದ್ದಿದ್ದಾರೆ.

ಮಹಿಳಾ ವಿಭಾಗದ 400 ಮೀಟರ್ ಹರ್ಡಲ್ಸ್‌ನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ದೀಕ್ಷಿತಾ ರಾಮ್ ಗೌಡ ಬೆಳ್ಳಿ ಪದಕ ಗೆದ್ದುಕೊಂಡಿದ್ದಾರೆ. ಧಾರವಾಡ ವಿಶ್ವವಿದ್ಯಾಲಯದ ಮೇಘಾ ಮುನವಲ್ಲಿಮಟ್ ಕಂಚಿನ ಪದಕಕ್ಕೆ ಭಾಜನರಾಗಿದ್ದಾರೆ.

ರಾಜ್ಯದ ವಿದ್ಯಾರ್ಥಿಗಳಿಗೆ ಇಂದು ನಾಲ್ಕು ಬೆಳ್ಳಿ, ಎರಡು ಕಂಚಿನ ಪದಕ ಲಭಿಸಿದೆ.

*****************

ನಾಳೆ ದೇಶದಾದ್ಯಂತ ನಿವೃತ್ತ ಯೋಧರ ದಿನವನ್ನು ಆಚರಿಸಲಾಗುತ್ತಿದೆ. ದೇಶದ ಮೊದಲ ಸೇನಾ ಮುಖ್ಯಸ್ಥ ಜನರಲ್ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಅವರು ಸೇನೆಯಿಂದ ನಿವೃತ್ತರಾದ ದಿನವನ್ನು ಯೋಧರ ದಿನವನ್ನಾಗಿ ಆಚರಿಸಲಾಗುತ್ತಿದೆ.

ಈ ದಿನದಂದು ದೇಶ ಸೇವೆಗಾಗಿ ಮಾಜಿ ಯೋಧರು ನೀಡಿದ ಕೊಡುಗೆಗಳನ್ನು ಸ್ಮರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಪತ್ರ ಬರೆದಿದ್ದು, ಕ್ರೀಡಾಪಟುಗಳು, ನಟ, ನಟಿಯರನ್ನು ತೊಡಗಿಸಿಕೊಳ್ಳುವಂತೆ ಮನವಿ ಮಾಡಿದ್ದಾರೆ. ಇದರೊಂದಿಗೆ ಸಾಮಾಜಿಕ ಮಾಧ್ಯಮದ ಮೂಲಕ ಸಾರ್ವಜನಿಕರಿಗೆ ತೊಡಗಿಸಿಕೊಳ್ಳುವಂತೆ ಕರೆ ನೀಡಿದ್ದಾರೆ.

*****************

ಬಳ್ಳಾರಿಯಲ್ಲಿ ನಡೆದ ಬ್ಯಾನರ್ ಸಂಘರ್ಷ ಹಾಗೂ ಕಾಂಗ್ರೆಸ್ ಕಾರ್ಯಕರ್ತ ಗುಂಡೇಟಿಗೆ ಬಲಿಯಾದ ಪ್ರಕರಣದ ತನಿಖೆಯನ್ನು ಸಿಐಡಿ ಚುರುಕುಗೊಳಿಸಿದೆ. ಸಿಐಡಿಯ ಸಹಾಯಕ ಪ್ರಧಾನ ನಿರ್ದೇಶಕ ಬಿ.ಕೆ.ಸಿಂಗ್ ತಂಡ ಇಂದು ನಗರಕ್ಕೆ ಆಗಮಿಸಿ ಘಟನಾ ಸ್ಥಳದ ಪರಿಶೀಲನೆ ನಡೆಸಿದೆ.

ಬಳ್ಳಾರಿ ಬ್ಯಾನರ್ ಗಲಾಟೆಗೆ ಸಂಬಂಧಿಸಿ. ಆರು ಪ್ರಕರಣಗಳು ದಾಖಲಾಗಿದ್ದವು ಅದರಲ್ಲಿ 4 ಪ್ರಕರಣಗಳನ್ನು ರಾಜ್ಯ ಸರ್ಕಾರ ಸಿಐಡಿಗೆ ವಹಿಸಿದೆ.

*****************

ವಾಹನದ ಮಾಲೀಕರು ಪ್ರಾದೇಶಿಕ ಸಾರಿಗೆ ಇಲಾಖೆಯಲ್ಲಿ ನೀಡುವ ಸೇವೆಗಳಿಗಾಗಿ ಮದ್ಯವರ್ತಿಗಳನ್ನು ಸಂಪರ್ಕಿಸದೆ ಆನ್ ಲೈನ್ ಮೂಲಕ ಮನೆಯಲ್ಲಿ ಕುಳಿತು ಅರ್ಜಿಗಳನ್ನು ಸಲ್ಲಿಸಿ ನೇರವಾಗಿ ಸೇವೆಗಳನ್ನು ಪಡೆಯಬಹುದು ಎಂದು ಮೈಸೂರು ಪ್ರಾದೇಶಿಕ ಸಾರಿಗೆ ಅಧಿಕಾರಿ ವಸಂತ್ ಈಶ್ವರ್ ಚವ್ಹಾಣ್ ತಿಳಿಸಿದ್ದಾರೆ.

ಪ್ರತಿ ವರ್ಷದಂತೆ ಈ ವರ್ಷವು ಜನವರಿ ತಿಂಗಳನ್ನು ರಸ್ತೆ ಸುರಕ್ಷತಾ ಮಾಸಾಚರಣೆಯಾಗಿ ಅಚರಿಸಲಾಗುತ್ತಿದೆ. ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಹಾಗೂ ಯುವ ಜನರಿಗೆ ಅತಿವೇಗದ ವಾಹನ ಚಾಲನೆ, ವ್ಹೀಲಿಂಗ್, ಮದ್ಯಪಾನ ಮಾಡಿ ವಾಹನ ಚಲಾಯಿಸಿದರೆ ಆಗುವ ದುಷ್ಪರಿಣಾಮಗಳು ಹಾಗೂ ಕಾನೂನಿನ ಮೂಲಕ ವಿಧಿಸಬಹುದಾದ ಶಿಕ್ಷೆಗಳ ಬಗ್ಗೆ ಜಾಗೃತಿ ಮೂಡಿಸಲಾಗುವುದು ಎಂದು ಹೇಳಿದ್ದಾರೆ.

*****************

ಕಚ್ಚಾತೈಲ ಸಂಗ್ರಹಣಾ ಘಟಕದ ಕಾಮಗಾರಿ ಕೈಗೊಳ್ಳುವಾಗ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸುವಂತೆ ಉಡುಪಿ ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಪಾದೂರು ಗ್ರಾಮದಲ್ಲಿ ಕಚ್ಚಾತೈಲ ಸಂಗ್ರಹಣೆ ಘಟಕದ ಎರಡನೇ ಹಂತದ ಕಾಮಗಾರಿ ಬಗ್ಗೆ ಚರ್ಚಿಸಲು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಚ್ಚಾತೈಲ ಸಂಗ್ರಹಣಾ ಘಟಕದ ಅಭಿವೃದ್ಧಿಗೆ ಅಗತ್ಯವಿರುವ ಭೂಮಿಯನ್ನು ಸಾರ್ವಜನಿಕರಿಂದ ಸ್ವಾಧೀನ ಪಡಿಸಿಕೊಳ್ಳಲಾಗಿದೆ. ಈ ಘಟಕಕ್ಕೆ ಭೂಮಿ ನೀಡಿರುವ ಮಾಲೀಕರಿಗೆ ಪರಿಹಾರದ ಹಣವನ್ನು ಶೀಘ್ರದಲ್ಲಿಯೇ ನೀಡಬೇಕೆಂದು ಕೆ.ಐ.ಎ.ಡಿ.ಬಿ ಅಧಿಕಾರಿಗಳಿಗೆ ತಿಳಿಸಿದ್ದಾರೆ.

ಎರಡನೇ ಹಂತದ ಕಚ್ಚಾತೈಲ ಸಂಗ್ರಹಣಾ ಘಟಕದ ಕಾಮಗಾರಿಗಳನ್ನು ಕೈಗೊಳ್ಳುವ ಮುನ್ನ ಸುತ್ತಮುತ್ತ ಪ್ರದೇಶಗಳ ಮನೆಯ ವೀಡಿಯೋ ಚಿತ್ರೀಕರಣ ಮಾಡುವಂತೆ ನಿರ್ದೇಶನ ನೀಡಿದ್ದಾರೆ.

*****************

'ಜಿ ರಾಮ್ ಜಿ ಕಾಯ್ದೆ' ಕುರಿತು ಬಹಿರಂಗ ವೇದಿಕೆ ಅಥವಾ ವಿಧಾನಮಂಡಲದ ಅಧಿವೇಶನದಲ್ಲಿ ಚರ್ಚೆಗೆ ಬಿಜೆಪಿ ಸಿದ್ದವಿದೆ ಎಂದು ವಿಧಾನ ಪರಿಷತ್ ಸದಸ್ಯ ಪ್ರತಾಪಸಿಂಹ ನಾಯಕ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮನ್ರೆಗಾದ ನ್ಯೂನತೆಗಳನ್ನು ಸರಿಪಡಿಸಿ ಹೊಸ ಕಾಯ್ದೆ ತರಲಾಗಿದೆ ಎಂದು ಹೇಳಿದ್ದಾರೆ.

*****************

ರಾಮನಗರದ ಮಾಗಡಿ ತಾಲ್ಲೂಕಿನ ತಿರುಮಲೆ ಸರ್ಕಾರಿ ಬಿಆರ್‌ಸಿ ಶಾಲೆಯ ಆವರಣದಲ್ಲಿ ಇಂದು ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ವತಿಯಿಂದ ವಿಶೇಷಚೇತನರು ಹಾಗೂ ಹಿರಿಯ ನಾಗರಿಕರಿಗೆ ಉಚಿತ ಸಹಾಯಕ ಸಾಧನ–ಸಲಕರಣೆಗಳನ್ನು ಸಂಸದ ಡಾ. ಸಿ. ಎನ್. ಮಂಜುನಾಥ್ ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರತಿವರ್ಷ ರಸ್ತೆ ಅಪಘಾತಗಳಿಂದ ಸುಮಾರು 1.70 ಲಕ್ಷ ಜನರು ಸಾವನ್ನಪ್ಪುತ್ತಿದ್ದು, ಸುಮಾರು 3.30 ಲಕ್ಷ ಜನರು ಗಂಭೀರವಾಗಿ ಗಾಯಗೊಂಡು ಶಾಶ್ವತ ಅಂಗವಿಕಲತೆಯನ್ನು ಎದುರಿಸುತ್ತಿದ್ದಾರೆ ಎಂದು ಹೇಳಿದರು.

ಇದೇ ವೇಳೆ ಮಧುಮೇಹದಂತಹ ಕಾಯಿಲೆಗಳಿಂದ ಕಾಲುಗಳಿಗೆ ತೊಂದರೆ ಉಂಟಾಗಿ ಅನೇಕರು ಕೃತಕ ಅಂಗಗಳ ಅವಶ್ಯಕತೆ ಎದುರಿಸುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

********ಮುಕ್ತಾಯ*********